**ಕರ್ನಾಟಕ ಸರ್ಕಾರ**

ಸಂ.ಗ್ರಾಅಪ 03 ತಾಪಸ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 10.01.2013

**ಸುತ್ತೋಲೆ**

ವಿಷಯ: ಕರ್ನಾಟಕ ರಾಜ್ಯದಲ್ಲಿ ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಕುರಿತು.

---

1998 ರಿಂದ ರಾಜ್ಯದಲ್ಲಿ ಪ್ರತಿ ವರ್ಷ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಡಿ ರಾಜ್ಯದ 0–5 ವರ್ಷದವರೆಗಿನ ಎಲ್ಲಾ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕುವ ಕಾರ್ಯಕ್ರಮ ನಡೆಸಲಾಗುತ್ತಿದೆ. ಈ ನಿರಂತರ ಚಟುವಟಿಕೆಯಿಂದಾಗಿ ರಾಜ್ಯದಲ್ಲಿ ಪೋಲಿಯೋ ಬಹುತೇಕ ನಿರ್ಮೂಲನಗೊಳಿಸಲಾಗಿದೆ. ಪೋಲಿಯೋ ರೋಗವನ್ನು ಯಶಸ್ವಿಯಾಗಿ ತಡೆಗಟ್ಟುವ ಹಿನ್ನೆಲೆಯಲ್ಲಿ, 2012–13ನೇ ಸಾಲಿನಲ್ಲಿಯೂ ಸಹ ರಾಷ್ಟ್ರ ಹಾಗು ರಾಜ್ಯದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಭಾರತ ಸರ್ಕಾರದವರು 20ನೇ ಜನವರಿ 2013 ಮತ್ತು 24ನೇ ಫೆಬ್ರವರಿ 2013 ರಂದು ರಾಜ್ಯದ 0–5 ವರ್ಷದವರೆಗಿನ ಎಲ್ಲಾ ಮಕ್ಕಳಿಗೆ ರಕ್ಷಣಾತ್ಮಕ ಲಸಿಕಾ ಕಾರ್ಯಕ್ರಮವನ್ನು ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಮ್ಮಿಕೊಂಡಿರುತ್ತದೆ. ವಿವರ ಈ ಕೆಳಕಂಡಂತಿರುತ್ತದೆ:

(1) ರಾಜ್ಯದಲ್ಲಿ 0–5 ವರ್ಷದವರೆಗಿನ ಸುಮಾರು 74,86,897 ಮಕ್ಕಳಿಗೆ ಲಸಿಕೆಯನ್ನು ಹಾಕಬೇಕಾಗಿರುತ್ತದೆ.

(2) 1,32,133 ಮಕ್ಕಳನ್ನು ಅತಿ ಸೂಕ್ಷ್ಮವೆಂದು 11,416 ಪ್ರದೇಶಗಳಲ್ಲಿ ಗುರುತಿಸಲಾಗಿದೆ.

(3) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸುಮಾರು 31,418 ಪಲ್ಸ್ ಪೋಲಿಯೋ ಲಸಿಕಾ ಕೇಂದ್ರಗಳು, 48,995 ಗುಂಪುಗಳನ್ನು ರಚಿಸಲಾಗಿದೆ.

(4) ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಲು 1,05,068 ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

(5) ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಅವಶ್ಯವಿರುವ 95,08,360 ಪಲ್ಸ್ ಪೋಲಿಯೋ ಔಷಧಿಯು ಈಗಾಗಲೇ ಲಭ್ಯವಿದ್ದು, ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಯಗೊಳಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಿದ್ಧತೆ ಪೂರ್ಣಗೊಳಿಸಿರುತ್ತದೆ.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವು ಸಂಪೂರ್ಣ ಯಶಸ್ವಿಯಾಗಬೇಕಾದರೆ ಸಾರ್ವಜನಿಕರ ಸಹಕಾರ, ವಿವಿಧ ಸ್ತರದ ಪಂಚಾಯತ್ ರಾಜ್ ಸಂಸ್ಥೆಗಳ ಪ್ರತಿನಿಧಿಗಳ ಸಹಕಾರ, ಸ್ವಯಂ ಸೇವಾ ಸಂಸ್ಥೆಗಳ ಸಹಕಾರ ಮತ್ತು ಸರ್ಕಾರದ ವಿವಿಧ ಇಲಾಖೆಗಳ ಎಲ್ಲಾ ಅಧಿಕಾರಿ/ನೌಕರರ ಸಹಕಾರ ಅತ್ಯವಶ್ಯಕವಾಗಿರುತ್ತದೆ. ಆದ್ದರಿಂದ, 2012–13ನೇ ಸಾಲಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಸಂಸ್ಥೆಗಳು ಈ ಕೆಳಕಂಡಂತೆ ಕಾರ್ಯೋನ್ಮುಖವಾಗಲು ಸೂಚಿಸಿದೆ:

- ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗು ಜಿಲ್ಲಾ ಪಂಚಾಯತಿಯ ಸದಸ್ಯರುಗಳು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಬರುವ 0–5 ವರ್ಷದವರೆಗಿನ ಮಕ್ಕಳನ್ನು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ದಿನಾಂಕದಂದು ಲಸಿಕಾ ಕೇಂದ್ರಗಳಿಗೆ ಕರೆತರಲು ಪೋಷಕರ ಮನವೊಲಿಸುವುದು.

- ಗ್ರಾಮ ಪಂಚಾಯತಿ ವತಿಯಿಂದ ಪ್ರತಿ ಗ್ರಾಮದಲ್ಲಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ದಿನಾಂಕದ ಹಿಂದಿನ ಮೂರು ದಿನಗಳಲ್ಲಿ ನಿರಂತರ ಪ್ರಚಾರ ಮಾಡುವುದು (ಟಾಂ-ಟಾಂ, ಧ್ವನಿವರ್ಧಕ, ಕರಪತ್ರಗಳನ್ನು ಪ್ರತಿ ಮನೆಗೂ ವಿತರಿಸುವುದು ಇತ್ಯಾದಿ).
- ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಪ್ರತಿ ಗ್ರಾಮದಲ್ಲಿಯೂ ಮಕ್ಕಳ ಹಾಗು ಸಾರ್ವಜನಿಕರ ಜಾಥಾ ನಡೆಸಿ ಅರಿವು ಮೂಡಿಸುವುದು.
- ಸ್ಥಳೀಯ ಶಿಕ್ಷಣ ಸಂಸ್ಥೆಗಳು ಹಾಗು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕೇಂದ್ರದ ಸಂಸ್ಥೆಗಳ (ಅಂಗನವಾಡಿ ಕೇಂದ್ರಗಳು) ಮುಖ್ಯಸ್ಥರ ಸಭೆಯನ್ನು ಕರೆದು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವರಿಕೆ ಮಾಡಿಕೊಡುವುದು.
- ಪಲ್ಸ್ ಪೋಲಿಯೋ ಲಸಿಕೆಯ ಬಗ್ಗೆ ತಪ್ಪು ಕಲ್ಪನೆ ಬರದಂತೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು.
- ಗ್ರಾಮಸ್ಥರಲ್ಲಿ ಈ ಕಾರ್ಯಕ್ರಮದ ಮಹತ್ವವನ್ನು ಮನವರಿಕೆ ಮಾಡಿಕೊಡುವುದು.
- ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿಯ ಕಾರ್ಯದರ್ಶಿಗಳು ಹಾಗು ಇತರೆ ಸಿಬ್ಬಂದಿ ವರ್ಗದವರು, ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಪ್ರತಿ ಮನೆಗೆ ಭೇಟಿ ಮಾಡಿ ಈ ಕಾರ್ಯಕ್ರಮದ ವಿಶೇಷತೆಯನ್ನು ಮನವರಿಕೆ ಮಾಡಿಕೊಡುವುದು.
- ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಕಾರ್ಯಕ್ರಮ ಯಶಸ್ವಿಯಾಗುವಂತೆ ನೋಡಿಕೊಳ್ಳಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗು ಪಂಚಾಯತ್ ರಾಜ್ ಸಂಸ್ಥೆಯ ಅಧಿಕಾರಿಗಳೊಂದಿಗೆ ಮತ್ತು ಚುನಾಯಿತ ಪ್ರತಿನಿಧಿಗಳೊಡನೆ ಸಮನ್ವಯ ಸಾಧಿಸುವುದು.
- ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯತ್ ರಾಜ್ ಸಂಸ್ಥೆಯ ಎಲ್ಲಾ ಸದಸ್ಯರು ಹಾಗು ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸಮನ್ವಯ ಸಾಧಿಸುವುದು.
- ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಉದ್ದೇಶವನ್ನು ಸಾಕಾರಗೊಳಿಸಲು ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಹಾಗು ಚುನಾಯಿತ ಪ್ರತಿನಿಧಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವಂತೆ ಹಾಗು ಸ್ಥಳೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಕ್ತ ಸಹಕಾರ ನೀಡುವಂತೆ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ.

ಎಂ.ಲೀನಾ ನರೋನ್ಹಾ 10.1.13
(ಮಾರ್ಗರೇಟ್ ಲೀನಾ ನರೋನ್ಹಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್).

2. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ/ಗ್ರಾ.ಅ&ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ&ಪಂ.ರಾಜ್ ಇಲಾಖೆ.
5. ಆಯುಕ್ತರು/ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಗಳು.
6. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಗಣಕ ಕೋಶ ಶಾಖೆಗೆ.
7. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
8. ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗ್ರೂಪ್ ಇ-ಮೇಲ್‌ನಲ್ಲಿ ಕಳುಹಿಸಲು.